**ಸಿ.ಮಿಸ್. ಸಂ ಃ 6 / 2026**
**ಪಿ.ಡಬ್ಲೂ ಃ 01**

**ದಿನಾಂಕ ಃ 03.03.2026 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಃ- ಅರ್ಜಿದಾರರ ಪರ ಶ್ರೀ. GHM** ವಕೀಲರಿಂದ ಃ-

ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಪ್ರಮಾಣಪತ್ರದಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಸದರಿ ಪ್ರಮಾಣ ಪತ್ರವನ್ನು ವಕೀಲರಿಗೆ ನಾನು ಹೇಳಿ ಬರೆಯಿರುತ್ತೇನೆ.

ಅಲಭ್ಯ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-01 ಎಂದು ಗುರುತಿಸಲಾಯಿತು. ವಂಶವೃಕ್ಷ ಪ್ರಮಾಣಪತ್ರವನ್ನು ಹಾಜರು ಪಡಿಸಿದ್ದು ನಿಪಿ-02 ಎಂದು ಗುರುತಿಸಲಾಯಿತು. ಅರ್ಜಿದಾರರ ಧೃಡೀಕೃತ ನಕಲಿನ ಆಧಾರ್ ಕಾರ್ಡ್ ಗಳನ್ನು ಹಾಜರುಪಡಿಸಿದ್ದು ನಿಪಿ-03, ನಿಪಿ-04 , ನಿಪಿ-05 ಮತ್ತು ನಿಪಿ-06 ಎಂದು ಗುರುತಿಸಲಾಯಿತು. ದಿನಾಂಕ 31.01.2026 ರಂದು ಹೊಸದಿಗಂತ ದಿನಪತ್ರಿಕೆಯಲ್ಲಿ ಹೊರಡಿಸಿದ ಪ್ರಕಟಣೆಯನ್ನು ನಿಪಿ-07 ಎಂದು ಗುರುತಿಸಲಾಯಿತು. ದಿನಾಂಕ 31.01.2026 ರಂದು ಸುವರ್ಣ ಟೈಮ್ಸ್ ಆಫ್ ಕರ್ನಾಟಕ ದಿನಪತ್ರಿಕೆಯಲ್ಲಿ ಹೊರಡಿಸಿದ ಪ್ರಕಟಣೆಯನ್ನು ಹಾಜರು ಪಡಿಸಿದ್ದು ನಿಪಿ-08 ಎಂದು ಗುರುತಿಸಲಾಯಿತು.

**ಎದುರುದಾರರು ಏಕಪಕ್ಷೀಯವಾಗಿರುವುದರಿಂದ ಪಾಟೀಸವಾಲು ಇರುವುದಿಲ್ಲ ಎಂದು ತೆಗೆದುಕೊಳ್ಳಲಾಯಿತು.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**ಪ್ರ. ನ್ಯಾ . ದಂ. ಮತ್ತು ಜೆ. ಎಂ. ಎಫ್. ಸಿ. ಮಾಗಡಿ.**